KARNATAK UNIVERSITY, DHARWAD
ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
Examination G.A.D. Section
ಪರೀಕ್ಷಾ ಸಾಮಾನ್ಯ ಆಡಳಿತ ವಿಭಾಗ
"NAAC Accredited with "A" Grade 2022"

Pavate Nagar, Dharwad
ಪಾವಟೆನಗರ, ಧಾರವಾಡ

Fax No. 0837-2741928
Tel Ph No. 0836-2215267
Website : www.kud.ac.in

ನಂ:/ಕವಿವಿ/ಪರೀಕ್ಷಾ/ಜಿಎಡಿ/2023/ 1235 ದಿನಾಂಕ: 29/12/2023

## ಪರಿಷ್ಕೃತ ಸುತ್ತೋಲೆ

ವಿಷಯ : ಜನೇವರಿ/ಫೆಬ್ರುವರಿ–2024 ರಲ್ಲಿ ಜರಗುವ ರಾಷ್ಟ್ರೀಯ ಶಿಕ್ಷಣ ನೀತಿ–2020 (NEP) ಅಡಿಯಲ್ಲಿ ಎಲ್ಲ ಸ್ನಾತಕ ಪದವಿಗಳ 1, 3 ಮತ್ತು 5 ನೇ ಸೆಮಿಸ್ಟರ್‌ನ ವಿದ್ಯಾರ್ಥಿಗಳಿಗೆ ಪರೀಕ್ಷಾ ಫಾರ್ಮ/ಶುಲ್ಕ ತುಂಬುವ ಕುರಿತು.

ಉಲ್ಲೇಖ : ತಿದ್ದುಪಡಿ ಅಧಿಸೂಚನೆ.ನಂ/ಕವಿವಿ/ಪರೀಕ್ಷಾ/ಜಿಎಡಿ/2023/1213, ದಿನಾಂಕ:19/12/2023.

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ ಜನೇವರಿ/ಫೆಬ್ರುವರಿ–2024 ರಲ್ಲಿ ಜರಗುವ ರಾಷ್ಟ್ರೀಯ ಶಿಕ್ಷಣ ನೀತಿ–2020ರ ಅಡಿಯಲ್ಲಿ ಎಲ್ಲ ಸ್ನಾತಕ ಪದವಿಗಳ 1, 3 ಮತ್ತು 5 ನೇ ಸೆಮಿಸ್ಟರ್ ರೆಗ್ಯೂಲರ್/ರಿಪೀಟರ್ಸ್ ವಿದ್ಯಾರ್ಥಿಗಳಿಗೆ ಪರೀಕ್ಷಾ ಫಾರ್ಮ/ಶುಲ್ಕವನ್ನು ತುಂಬಲು ಅಧಿಸೂಚನೆಯನ್ನು ಹೊರಡಿಸಲಾಗಿತ್ತು. ಮುಂದುವರೆದು, ಯು.ಯು.ಸಿ.ಎಂ.ಎಸ್. ತಂತ್ರಾಂಶದ ತಾಂತ್ರಿಕ ಕಾರಣಗಳಿಂದಾಗಿ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪರೀಕ್ಷಾ ಫಾರ್ಮ/ಶುಲ್ಕವನ್ನು ತುಂಬುವ ಅವಧಿಯನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

1) ವಿದ್ಯಾರ್ಥಿಗಳು ಪರೀಕ್ಷಾ ಅರ್ಜಿಯನ್ನು **UUCMS** ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕವನ್ನು ಭರಿಸಿ ದಂಡವಿಲ್ಲದೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:**08/01/2024.**
2) ವಿದ್ಯಾರ್ಥಿಗಳು ರೂ.**180**/– ಮೊದಲನೆಯ ದಂಡದೊಂದಿಗೆ ಪರೀಕ್ಷಾ ಅರ್ಜಿಯನ್ನು **UUCMS** ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕ ಭರಿಸಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:**10/01/2024.**
3) ವಿದ್ಯಾರ್ಥಿಗಳು ರೂ.**200**/– ಎರಡನೆಯ ದಂಡದೊಂದಿಗೆ ಪರೀಕ್ಷಾ ಅರ್ಜಿಯನ್ನು **UUCMS** ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕ ಭರಿಸಿ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ:**12/01/2024.**
4) ಪ್ರಾಚಾರ್ಯರು ತಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳು **UUCMS** ತಂತ್ರಾಂಶದ ಮೂಲಕ ಭರ್ತಿ ಮಾಡಿದ ಪರೀಕ್ಷಾ ಅರ್ಜಿ/ಶುಲ್ಕದ ವಿವರಗಳನ್ನು ಪರಿಶೀಲಿಸಿ ಯಾದಿಯನ್ನು ದಿನಾಂಕ:**13/01/2024** ರ ಒಳಗಾಗಿ ವಿಶ್ವವಿದ್ಯಾಲಯಕ್ಕ ಸಲ್ಲಿಸುವುದು.

ಸದರ ಅಧಿಸೂಚನೆಯನ್ವಯ ಎಲ್ಲ ವಿದ್ಯಾರ್ಥಿಗಳು ಪರೀಕ್ಷಾ ಫಾರ್ಮ/ ಶುಲ್ಕ ತುಂಬುವಾಗ ಸರಿಯಾಗಿ ಪರಿಶೀಲಿಸಿ ಭರಿಸಲು ತಿಳಿಸಲಾಗಿದೆ. ಮುಂದುವರೆದು, 5 ನೇ ಸೆಮಿಸ್ಟರ್‌ನ ವಿದ್ಯಾರ್ಥಿಗಳು 1 ಮತ್ತು 3 ನೇ ಸೆಮಿಸ್ಟರ್ ಬ್ಯಾಕಲಾಗ್ ಪೇಪರಗಳು ಬಾಕಿ ಇದ್ದಲ್ಲಿ ಅಂತಹ ವಿದ್ಯಾರ್ಥಿಗಳ 5 ನೇ ಸೆಮಿಸ್ಟರ್‌ನ ಪರೀಕ್ಷಾ ಫಾರ್ಮ/ ಶುಲ್ಕ ತುಂಬುವಾಗ ಬ್ಯಾಕಲಾಗ್ ಪೇಪರಗಳ ಪರೀಕ್ಷಾ ಶುಲ್ಕವು ಯು.ಯು.ಸಿ.ಎಂ.ಎಸ್. ತಂತ್ರಾಂಶದಲ್ಲಿ ತಾಂತ್ರಿಕ ಕಾರಣಗಳಿಂದ ಸೇರ್ಪಡೆಯಾಗಿರುವದಿಲ್ಲ. ಮಹಾವಿದ್ಯಾಲಯದವರು ಅಂತಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಕ್ರೋಢಿಕರಿಸಿ SBI Online Portal ಮುಖಾಂತರ ವಿಶ್ವವಿದ್ಯಾಲಯಕ್ಕೆ ಭರಿಸಲು ಈ ಮೂಲಕ ತಿಳಿಸಲಾಗಿದೆ.

ಕುಲಸಚಿವರು(ಮೌಲ್ಯಮಾಪನ)

ಗೆ,

ಕರ್ನಾಟಕ ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲ ಸಂಲಗ್ನ ಹಾಗೂ ಅಧೀನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳು.

ಪ್ರತಿ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ:

1. ಸಿಸ್ಟಮ್ ಎನಾಲಿಸ್ಟ್, ಗಣಕಯಂತ್ರ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
2. ನಿರ್ದೇಶಕರು ಮಾಹಿತಿ ತಂತ್ರಜ್ಞಾನ ವಿಭಾಗ ಕ.ವಿ.ವಿ. ಧಾರವಾಡ. (ಅಂತರ್ಜಾಲದಲ್ಲಿ ಪ್ರಕಟಿಸುವುದು)
3. ಕುಲಪತಿಗಳ, ಕುಲಸಚಿವರ, ಕುಲಸಚಿವರು(ಮೌಲ್ಯಮಾಪನ), ವಿತ್ತಾಧಿಕಾರಿಗಳು ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ ಧಾರವಾಡ.
4. ಉಪಕುಲಸಚಿವರು / ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
5. ಎಲ್ಲ ಅಧೀಕ್ಷಕರುಗಳಿಗೆ, ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ.